ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಬೀದರ್ ನಗರಕ್ಕೆ ಕುಡಿಯುವ ನೀರು ಪೂರೈಕೆ ಮಾಡುವ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-

159(211) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ನಗರ ಸಭೆ ವ್ಯಾಪ್ತಿಯ ಎಲ್ಲಾ 35 ವಾರ್ಡ್‌ಗಳಲ್ಲಿ ದಿನದ 24 ಗಂಟೆ ಕುಡಿಯುವ ನೀರು ಪೂರೈಕೆ ಯೋಜನೆ ಆರಂಭವಾಗಿದೆಯೇ ;

(ಆ) ಈ ಯೋಜನೆಗಾಗಿ ಸರ್ಕಾರ ಇಲ್ಲಿಯವರೆಗೆ ಎಷ್ಟು ಹಣ ಖರ್ಚು ಮಾಡಿದೆ; ಇನ್ನೂ ಎಷ್ಟು ಕಾಮಗಾರಿ ಬಾಕಿ ಇದೆ ; ಕಾಮಗಾರಿ ಯಾವ ಏಜೆನ್ಸಿಗೆ ನೀಡಲಾಗಿದೆ ;

(ಇ) ಯೋಜನೆ ಕಾಮಗಾರಿ ಕಳಪೆಯಾಗಿರುವುದರಿಂದ ಅನೇಕ ಕಡೆ ಪೈಪುಗಳು ಒಡೆದು ನೀರು ಪೋಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?